# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ.. ಕನ್ನಡ ವಾರಪತ್ರಿಕೆ

**ಸುಭಾಷಿತ:**

ಯಾವಾಗ ಧರ್ಮದ ಅವನತಿ ಆಗುವುದೋ
ಯಾವಾಗ ಅಧರ್ಮದಲ್ಲಿ ಉನ್ನತಿ ಆಗುವುದೋ
ಆಗೆಲ್ಲಾ ಸತ್ಪುರುಷರ ಉದ್ಧಾರಕ್ಕಾಗಿ,
ಅಧರ್ಮಿಯರ ವಿನಾಶಕ್ಕಾಗಿ,
ಧರ್ಮದ ಪುನಸ್ಥಾಪನೆಗಾಗಿ
ನಾನು ಮತ್ತೆ ಮತ್ತೆ ಜನ್ಮ ತಾಳುತ್ತೇನೆ..
ಇದು ಪ್ರತಿ ಯುಗದಲ್ಲಿಯೂ ಆಗುತ್ತಲಿದೆ..
ಮುಂದೆಯೂ ಸದಾ ಆಗುತ್ತಲೇ ಇರುವುದು..
**ಭಗವಾನ್ ಶ್ರೀಕೃಷ್ಣ**



PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 06-03-2026 to 12-03-2026 ಬೆಲೆ:10-00 ಸಂಪುಟ–1 ಸಂಚಿಕೆ–23 ಪುಟಗಳು–6




ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು



ಬೇಸಿಗೆ ಭೂಮಿಯನ್ನು ಆವರಿಸಿಕೊಳ್ಳುತ್ತಿರುವುದರಿಂದ ನೀರಿನ ಪ್ರಮಾಣ ಕಡಿಮೆಯಾಗಲು ಪ್ರಾರಂಭವಾಗಿದೆ. ಮಂಗಳೂರು ನಗರಕ್ಕೆ ನೀರುಣಿಸುವ ನೇತ್ರಾವತಿ ಕ್ರಮೇಣ ಇಂಗುತ್ತಿದ್ದಾಳೆ. ನಗರದ ಜನರಿಗೆ ನೀರುಣಿಸುವ ಸಲುವಾಗಿ ನಿರ್ಮಿತವಾಗಿರುವ ತುಂಬೆ ಡ್ಯಾಂನಲ್ಲಿ ಸುಮಾರು 10.42 ಎಂಸಿಎಂ ನೀರು ಸಂಗ್ರಹವಾಗಿದ್ದು, ಇದರಿಂದ ಸುಮಾರು 39 ದಿನಗಳವರೆಗೆ ನೀರಿಗೆ ಕಷ್ಟ ಇಲ್ಲವೆನ್ನಬಹುದು. ಆದರೆ ಅಷ್ಟರಲ್ಲಿ ಒಂದೆರಡು ಒಳ್ಳೆ ಮಳೆ ಬಿದ್ದರೆ ಹೇಗೋ ನಿಭಾಯಿಸಬಹುದು, ಇಲ್ಲವಾದರೆ ನೀರಿಗೆ ಹಾಹಾಕಾರ ಕಟ್ಟಿಟ್ಟ ಬುತ್ತಿ. ಇದನ್ನು ಮನಗಂಡು ನಗರವಾಸಿಗಳು ಇಂದಿನಿಂದಲೇ ನೀರನ್ನು ಮಿತವಾಗಿ ಬಳಸುವುದು ಉತ್ತಮ.

## ರಾಜಗೋಪುರ ದೇವರ ಪಾದದ ಪ್ರತೀಕವಾಗಿದೆ –ಎಡನೀರು ಸ್ವಾಮೀಜಿ



**ಉಜಿರೆ:** ರಾಜಗೋಪುರ ದೇವರ ಪಾದದ ಪ್ರತೀಕವಾಗಿದೆ. ಅದಕ್ಕೆ ನಾವು ನಮಸ್ಕರಿಸುವುದು ದೇವರಿಗೆ ನಮಸ್ಕರಿಸಿದಂತೆಯೇ ಆಗುತ್ತದೆ ಎಂದು ಜಗದ್ಗುರು ಕಾಸರಗೋಡು ಶ್ರೀ ಶಂಕರಾಚಾರ್ಯ ಸಂಸ್ಥಾನ ಶ್ರೀ ಎಡನೀರು ಮಠದ ಸಚ್ಚಿದಾನಂದ ಭಾರತೀ ಶ್ರೀಪಾದಂಗಳವರು ಹೇಳಿದರು. ಅವರು ಉಜಿರೆ ಶ್ರೀ ಜನಾರ್ದನಸ್ವಾಮಿ ದೇವಸ್ಥಾನದ ಬ್ರಹ್ಮಕಲಶೋತ್ಸವ ಹಾಗೂ ನೂತನವಾಗಿ ನಿರ್ಮಾಣಗೊಂಡ ವಿಜಯರಾಜಗೋಪುರ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ದೀಪ ಪ್ರಜ್ವಲಿಸಿ ಮಾತನಾಡಿದರು. ಭಾರತೀಯ ಸಂಸ್ಕೃತಿಯಲ್ಲಿ ದೇವರ ಪಾದಕ್ಕೆ ವಿಶೇಷ ಮಹತ್ವವಿದೆ. ಅದು ಭಕ್ತಿ ಮತ್ತು ವಿನಯದ ಸಂಕೇತವಾಗಿದೆ. ದಕ್ಷಿಣ ಭಾರತದಲ್ಲಿ, ವಿಶೇಷವಾಗಿ ತಮಿಳುನಾಡಿನಲ್ಲಿ, ಗೋಪುರಗಳ ಮೂಲಕವೇ ದೇವಾಲಯಗಳನ್ನು ಗುರುತಿಸಲಾಗುತ್ತದೆ. ಅದೇ ರೀತಿ ಉಜಿರೆಯಲ್ಲಿ ನಿರ್ಮಾಣಗೊಂಡಿ ರುವ ವಿಜಯ ರಾಜಗೋಪುರವು ದೇವಸ್ಥಾನದ ಅಸ್ಮಿತೆಯನ್ನು ಮತ್ತಷ್ಟು ಹೆಚ್ಚಿಸಿದೆ ಎಂದು ಹೇಳಿದರು. ದೇವಾಲಯಗಳು **3ನೇ ಪುಟಕ್ಕೆ**

## ದಕ್ಷಿಣ ಕನ್ನಡಕ್ಕೆ 'ಎಲಿಫೆಂಟ್ ಟಾಸ್ಕ್ ಫೋರ್ಸ್'





**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯ ರೈತರ ದಶಕಗಳ ಆತಂಕಕ್ಕೆ ಕೊನೆಗೂ ಪರಿಹಾರ ಸಿಕ್ಕಿದೆ. ಸುಳ್ಯ, ಪುತ್ತೂರು, ಬೆಳ್ತಂಗಡಿ ಭಾಗದ ಕೃಷಿಕರ ನಿದ್ದೆಗೆಡಿಸಿದ್ದ ಕಾಡಾನೆ ಹಾವಳಿ ತಡೆಗಟ್ಟಲು ರಾಜ್ಯ ಸರ್ಕಾರವು ಪ್ರತ್ಯೇಕ 'ಆನೆ ಕಾರ್ಯಪಡೆ' (ಎಲಿಫೆಂಟ್ ಟಾಸ್ಕ್ ಫೋರ್ಸ್) ರಚಿಸಿ ಅಧಿಕೃತ ಆದೇಶ ಹೊರಡಿಸಿದೆ. ಸದನದ ಒಳಗೂ ಹೊರಗೂ ನಡೆಸಿದ ಹೋರಾಟಕ್ಕೆ ಈ ಮೂಲಕ ಬೃಹತ್ ಯಶಸ್ಸು ಲಭಿಸಿದೆ ಎಂದು ವಿಧಾನ ಪರಿಷತ್ ಶಾಸಕ ಶ್ರೀ ಕಿಶೋರ್ ಕುಮಾರ್ ಪುತ್ತೂರು ತಿಳಿಸಿದ್ದಾರೆ. ಈ ಹಿಂದೆ ಕಾಡಾನೆಗಳು ದಾಳಿ ಮಾಡಿದಾಗ ಕಾರ್ಯಾಚರಣೆ **3ನೇ ಪುಟಕ್ಕೆ**

## ಜನರ ಮೇಲೆ ತೆರಿಗೆಗಳ ಹೊರೆ ಖಚಿತ –ಆರ್ ಅಶೋಕ್



**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ 1.15 ಲಕ್ಷ ಕೋಟಿ ರೂ. ಸಾಲ ಮಾಡಿ ಬಜೆಟ್ ಮಂಡಿಸಲಿದ್ದಾರೆ. ಈ ಬಾರಿಯೂ ಜನರ ಮೇಲೆ ತೆರಿಗೆಗಳ ಹೊರೆ ಹಾಕುವುದು ಖಚಿತ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಹೇಳಿದರು. ಈ ಕುರಿತು ವಿಧಾನಸೌಧದಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಎಂದರೆ ತೆರಿಗೆ ಹೇರುವ ರಾಮಯ್ಯ ಆಗಿದ್ದಾರೆ. ಈ ಬಾರಿಯ ಕೇಂದ್ರ ಬಜೆಟ್‌ನಲ್ಲಿ ಸಚಿವೆ ನಿರ್ಮಲಾ ಸೀತಾರಾಮನ್ ತೆರಿಗೆಗಳ ಹೊರೆಯನ್ನು ಕಡಿಮೆ ಮಾಡಿದ್ದಾರೆ. ಆದರೆ, **3ನೇ ಪುಟಕ್ಕೆ**






# ರಾಜಗೋಪುರ ದೇವರ ಪಾದದ ಪ್ರತೀಕವಾಗಿದೆ – ಎಡನೀರು ಸ್ವಾಮೀಜಿ

ಒಂದನೇ ಪುಟದಿಂದ......

ಸಮಾಜವನ್ನು ಒಂದಾಗಿಸುವ ಪವಿತ್ರ ತಾಣಗಳಾಗಿವೆ. ಇಂತಹ ಧರ್ಮಕಾರ್ಯಗಳು ಮುಂದಿನ ಪೀಳಿಗೆಗೂ ಸಾಗಬೇಕು. ಹಿರಿಯರು ಯುವಪೀಳಿಗೆಯನ್ನು ಒಟ್ಟುಗೂಡಿಸಿ ಪ್ರೇರೇಪಿಸಬೇಕು. ದೇವಾಲಯಗಳ ಪವಿತ್ರತೆಯನ್ನು ಕಾಪಾಡುವುದು ನಮ್ಮೆಲ್ಲರ ಜವಾಬ್ದಾರಿ. ದೇವಸ್ಥಾನದೊಂದಿಗೆ ನಿರಂತರ ಸಂಪರ್ಕ ಇಟ್ಟುಕೊಂಡರೆ ಮಾತ್ರ ಇಂತಹ ಕಾರ್ಯಗಳು ಮುಂದುವರಿಯುತ್ತವೆ ಎಂದು ಹೇಳಿದರು. ದೇವಾಲಯದ ಆಡಳಿತ ಮೊಕ್ತೇಸರರು ಮನೆ ಮನೆಗಳಿಗೆ ತೆರಳಿ ಭಕ್ತರನ್ನು ಆಹ್ವಾನಿಸುತ್ತಿರುವುದು ಪ್ರಶಂಸನೀಯ ಕೆಲಸವಾಗಿದೆ. ಜನಬಲ, ಧನಬಲದ ಜೊತೆಗೆ ಜನಾರ್ದನನ ಅನುಗ್ರಹವೂ ಇದ್ದರೆ ಯಾವುದೇ ಕಾರ್ಯವೂ ಯಶಸ್ವಿಯಾಗಿ ನೆರವೇರುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಜನರ ಮೇಲೆ ತೆರಿಗೆಗಳ ಹೊರೆ ಖಚಿತ –ಆರ್‌ಅಶೋಕ್

ಒಂದನೇ ಪುಟದಿಂದ......

ಸಿಎಂ ಸಿದ್ದರಾಮಯ್ಯ ತಿಂಗಳಿಗೆ ನಾಲ್ಕರಂತೆ ತೆರಿಗೆ ಹಾಕುತ್ತಾರೆ. ಈಗಾಗಲೇ 36 ತೆರಿಗೆಗಳನ್ನು ಜನರ ಮೇಲೆ ಹೇರಿದ್ದಾರೆ. ಚುನಾವಣೆಗೆ ಮುನ್ನ ಜನರ ಮೇಲೆ ಹೊರೆ ಹಾಕದ ಗ್ಯಾರಂಟಿ ತರುತ್ತೇವೆ ಎಂದು ಭರವಸೆ ನೀಡಿ, ಈಗ ತೆರಿಗೆಗಳ ಹೊರೆ ಹೇರಿದ್ದಾರೆ. ಸಿದ್ದರಾಮಯ್ಯ ಅವಧಿ ಮುಗಿಯುವ ವೇಳೆಗೆ ಒಟ್ಟು ಸಾಲ 8 ಲಕ್ಷ ಕೋಟಿರೂ. ಮೀರಲಿದೆ. ಇದರಿಂದಾಗಿ ಆರ್ಥಿಕ ಶಿಸ್ತು ಮೀರಿ ಹೋಗುತ್ತದೆ. ಇದು ಅವರ ಕಣ್ಕಟ್ಟು ವಿದ್ಯೆ ಎಂದರು. ಸಿಎಂ ಸಿದ್ದರಾಮಯ್ಯ ಇಲ್ಲದ ಆದಾಯವನ್ನು ಸೃಷ್ಟಿಸಿ ಜಿಎಸ್‌ಡಿಪಿಗೆ ಹೋಲಿಕೆ ಮಾಡುವ ಶೇಕಡಾ ಪ್ರಮಾಣವನ್ನು ಕಡಿಮೆ ಇರುವಂತೆ ತೋರಿಸುತ್ತಾರೆ. ಈ ಮೂಲಕ ಆರ್ಥಿಕ ಶಿಸ್ತು ಪಾಲಿಸಿದ್ದೇವೆ ಎಂದು ಸುಳ್ಳಾಗಿ ತೋರಿಸುತ್ತಾರೆ. ಬಜೆಟ್ ಎಂದರೆ ಆದಾಯ ಹೆಚ್ಚಿಸಿ, ಜನರಿಗೆ ಹೊರೆಯಾಗದಂತೆ ಮಾಡಬೇಕು. ಇದನ್ನೇ ಆರ್ಥಿಕ ಪರಿಣತಿ ಎಂದು ಹೇಳುತ್ತಾರೆ. ಸಾಲ ಮಾಡಿ ಸರ್ಕಾರ ನಡೆಸಲು ಇವರೇ ಬೇಕಿಲ್ಲ. ರಾಜ್ಯದ ಆರ್ಥಿಕ ಪರಿಸ್ಥಿತಿ ಸುಧಾರಣೆಯಾಗಲಿದೆ ಎಂದು ಜನರು ಅಂದು ಕೊಂಡಿದ್ದು ಸಂಪೂರ್ಣ ಸುಳ್ಳಾಗಿದೆ ಎಂದು ಆರೋಪಿಸಿದರು. ಈ ಹಿಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸಾಲ ಇಲ್ಲದ ಬಜೆಟ್ ಮಂಡಿಸಿದ್ದು, ಇನ್ನೂ 24,400 ಕೋಟಿ ರೂ. ಸಾಲ ಪಡೆಯಬಹುದಿತ್ತು. ಅಂತಹ ಅವಕಾಶ ಇದ್ದರೂ ಅವರು ಆಗ ಸಾಲ ಪಡೆದಿರಲಿಲ್ಲ. ಕಾಂಗ್ರೆಸ್ ಮಾತ್ರ ಪ್ರತಿ ವರ್ಷ ಸಾಲ ಪಡೆಯುತ್ತಲೇ ಇದೆ. ಈ ಬಾರಿ 1.15 ಲಕ್ಷಕೋಟಿರೂ. ಸಾಲ ಪಡೆಯಲಿದ್ದಾರೆ. ಸಾಲವನ್ನು ಜನರ ತಲೆ ಮೇಲೆ ಹೇರುವ ಬಜೆಟ್‌ನ್ನು ಈ ಬಾರಿ ಮಂಡಿಸುತ್ತಾರೆ. ನಂಜುಂಡಪ್ಪ ವರದಿಯಲ್ಲಿದ್ದ ಹಿಂದುಳಿದ ತಾಲೂಕುಗಳ ಸಂಖ್ಯೆ, ಗೋವಿಂದರಾವ್ ವರದಿಯಲ್ಲಿ ಇನ್ನಷ್ಟು ಅಧಿಕವಾಗಿದೆ. ಹಿಂದುಳಿದ ತಾಲೂಕುಗಳ ಅಭಿವೃದ್ಧಿಗೆ ಪ್ರತಿ ವರ್ಷ 15,000 ಕೋಟಿರೂ. ಮೀಸಲಿಡಬೇಕೆಂದು ಸರ್ಕಾರಕ್ಕೆ ಪತ್ರ ಬರೆದಿದ್ದೇನೆ. ಈ ಬಜೆಟ್‌ನಲ್ಲಿ ಸರ್ಕಾರ ಇಷ್ಟೂ ಅನುದಾನವನ್ನು ಮೀಸಲಿಡಬೇಕುಎಂದು ಆಗ್ರಹಿಸಿದರು.

# ಪಾಂಡೇಶ್ವರ ರೈಲ್ವೆ ಲೆವೆಲ್ ಕ್ರಾಸಿಂಗ್ ರಸ್ತೆ ಚತುಷ್ಪಥವಾಗಿ ಅಭಿವೃದ್ಧಿ



ಮಂಗಳೂರು: ನಗರದ ವಾಹನ ಸವಾರರು ಹಾಗೂ ಸಾರ್ವಜನಿಕರ ದಶಕಗಳ ಕಾಲದ ಟ್ರಾಫಿಕ್ ಕಿರಿಕಿರಿಗೆ ಕೊನೆಗೂ ಪರಿಹಾರ ಸಿಗುವ ಲಕ್ಷಣಗಳು ಗೋಚರಿಸಿವೆ. ಬಹು ವರ್ಷಗಳಿಂದ ನನೆಗುದಿಗೆ ಬಿದ್ದಿದ್ದ ಪಾಂಡೇಶ್ವರ ಲೆವೆಲ್ ಕ್ರಾಸಿಂಗ್ ರಸ್ತೆಯನ್ನು ಚತುಷ್ಪಥವಾಗಿ ಅಭಿವೃದ್ಧಿಪಡಿಸಲು ದಕ್ಷಿಣ ರೈಲ್ವೆ ಇಲಾಖೆ ಅಧಿಕೃತ ಅನುಮೋದನೆ ನೀಡಿದೆ ಎಂದು ಸಂಸದ ಕ್ಯಾ. ಬ್ರಿಜೇ ಶ್ ಚೌಟ ಅವರ ಕಚೇರಿ ತಿಳಿಸಿದೆ. ಸಮಸ್ಯೆಯ ಗಂಭೀರತೆಯನ್ನು ಅರಿತ ಸಂಸದ ಕ್ಯಾ. ಬ್ರಿಜೇಶ್ ಚೌಟ ಇತ್ತೀಚೆಗೆ ಶಾಸಕ ವೇದವ್ಯಾಸ ಕಾ ಮತ್ ಹಾಗೂ ಜಿಲ್ಲಾಧಿಕಾರಿಗಳ ಸಮ್ಮುಖದಲ್ಲಿ ರೈಲ್ವೆ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಕಟ್ಟುನಿಟ್ಟಿನ ಸೂಚನೆ ನೀಡಿದ್ದರು. ರೈಲ್ವೆ ಇಲಾಖೆಯ ಉನ್ನತ ಅಧಿಕಾರಿಗಳಾದ ಜಿಎಂ ಹಾಗೂ ಪಾಲಕ್ಕಾಡ್ ವಿಭಾಗದ ಡಿಆರ್‌ಎಂ ಅವರೊಂದಿಗೆ ನಿರಂತರ ಸಂಪ ರ್ಕ ಸಾಧಿಸಿ, ತಾಂತ್ರಿಕ ವರದಿಯನ್ನು ಸಲ್ಲಿಸುವಂತೆ ಪಾಲಿಕೆಗೆ ನಿರ್ದೇಶನ ನೀಡಿದ್ದರು. ಈ ಸತತ ಫಾಲೋ-ಅಪ್‌ನ ಫಲವಾಗಿ ಈಗ ರೈಲ್ವೆ ಇಲಾಖೆ ಒಪ್ಪಿಗೆ ಸೂಚಿಸಿದೆ.

# ಅತ್ಯಂತ ಹಿರಿಯ ನಾಗರಿಕ ವ್ಯಕ್ತಿಯ ಅಂಗಾಂಗ ದಾನ !



ಮಂಗಳೂರು : ಮಂಗಳೂರಿನ ಕಂಕನಾಡಿ ಫಾದರ್ ಮುಲ್ಲರ್ ಮೆಡಿಕಲ್ ಕಾಲೇಜಿನಲ್ಲಿ 65 ವರ್ಷ ಪ್ರಾಯದ ವ್ಯಕ್ತಿಯೊಬ್ಬರ ಅಂಗಾಂಗ ದಾನ ಪ್ರಕ್ರಿಯೆ ನಡೆದಿದ್ದು, ಇದು ದಕ್ಷಿಣ ಕನ್ನಡ ಜಿಲ್ಲೆಯ ಅತ್ಯಂತ ಹಿರಿಯ ನಾಗರಿಕ ರೊಬ್ಬರು ಮಾಡಿದ ಅಂಗಾಂಗ ದಾನ ಎಂಬುದಾಗಿ ಗುರುತಿಸಲ್ಪಟ್ಟಿದೆ. ಕುಟುಂಬದ ಸದಸ್ಯರಿಗೆ ಅಂಗಾಂಗ ದಾನದ ಬಗ್ಗೆ ತಿಳುವಳಿಕೆ ನೀಡಲಾಯಿತು. ಕೋಟ್ರಾನ್ ಅವರ ಪತ್ನಿ ಸುರೇಖಾ ಮತ್ತು ಸಹೋದರ ಕೇಶವ ಪೂಜಾರಿ ಹಾಗೂ ಕುಟುಂಬ ಇತರ ಸದಸ್ಯರು ಅಂಗಾಂಗ ದಾನಕ್ಕೆ ಸಂಪೂರ್ಣ ಒಪ್ಪಿಗೆ ನೀಡಿದರು. ಬಳಿಕ ಜೀವ ಸಾರ್ಥಕತೆ ಸಂಸ್ಥೆಗೆ ಮಾಹಿತಿ ನೀಡಿ ಅದರ ಮಾರ್ಗದರ್ಶನದಂತೆ ಅಂಗಾಂಗ ದಾನ ಪ್ರಕ್ರಿಯೆಗೆ ಕ್ರಮ ಕೈಗೊಳ್ಳಲಾಯಿತು.

# ಉಜಿರೆ ಶ್ರೀ ಜನಾರ್ದನ ದೇವಸ್ಥಾನ ಬ್ರಹ್ಮಕಲಶೋತ್ಸವ



ಉಜಿರೆ: ವೇದಗಳು ಭಗವಂತನ ಉಸಿರು ಎಂಬ ನಂಬಿಕೆ ಇದೆ. ಭಗವಂತನ ಸನ್ನಿಧಾನಕ್ಕಾಗಿ ದೇವಸ್ಥಾನಗಳ ಪರಿಕಲ್ಪನೆ ಬಳಕೆಗೆ ಬಂದಿದೆ. ಆಗಮಗಳ ಪ್ರಕಾರ ದೇವಸ್ಥಾನ ಶರೀರ ಎಂದು ಭಾವಿಸಿದರೆ, ದೇವರು ಆತ್ಮನ ಸ್ವರೂಪದಲ್ಲಿರುತ್ತಾನೆ. ದೇವರ ಸಾನ್ನಿಧ್ಯದಲ್ಲಿ ಅರ್ಚಕರು ಹಾಗೂ ತಂತ್ರಿಗಳು ಮಾಡುವ ವೇದ, ಪುರಾಣಗಳ ಪಾರಾಯಣ, ಮಂತ್ರಪಠಣ, ಅನ್ನದಾನ ಮೊದಲಾದ ಕಾರ್ಯಗಳಿಂದ ದೇವರ ಸಾನ್ನಿಧ್ಯ ವೃದ್ಧಿಯಾಗಿ ಭಕ್ತರ ಪ್ರಾರ್ಥನೆಗಳು, ಅಭೀಷ್ಟಗಳು ಈಡೇರುತ್ತವೆ ಎಂದು ಉಡುಪಿ ಜಿಲ್ಲಾ ಹಂಗಾರಕಟ್ಟೆ ಬಾಳೆಕುದ್ರಿ ಮಠದ ಪೂಜ್ಯ ವಾಸುದೇವ ಸದಾಶಿವಾಶ್ರಮ ಸ್ವಾಮೀಜಿ ಹೇಳಿದರು. ಅವರು ಸೋಮವಾರ ಉಜಿರೆಯಲ್ಲಿ ಕೃಷ್ಣಾನುಗ್ರಹ ಸಭಾಭವನದಲ್ಲಿ ಶ್ರೀ ಜನಾರ್ದನ ದೇವಸ್ಥಾನದ ಬ್ರಹ್ಮಕಲಶೋತ್ಸವದ ಪ್ರಾರಂಭೋತ್ಸವವನ್ನು ಉದ್ಘಾಟಿಸಿ ಶುಭ ಹಾರೈಸಿದರು. ವಿಶೇಷ ಪೂಜೆ, ಆರಾಧನೆಗಳಿಂದ ಜನರ ಕಲ್ಯಾಣದೊಂದಿಗೆ ಲೋಕಕಲ್ಯಾಣವೂ ಆಗುತ್ತದೆ ಎಂದರು.

# ನಗರದ ಸುಸ್ಥಿರ ಅಭಿವೃದ್ಧಿಗೆ ಚಿಂತನ–ಮಂಥನ



ಮಂಗಳೂರು: ಕರಾವಳಿಯ ಹೆಮ್ಮೆಯ ನಗರಿ ಮಂಗಳೂರಿನ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿಕೊಂಡು, ಆಧುನಿಕ ಸವಾಲುಗಳನ್ನು ಎದುರಿಸುವ ನಿಟ್ಟಿನಲ್ಲಿ ಸಮಗ್ರ ಅಭಿವೃದ್ಧಿಯ ದಾರಿಯನ್ನು ಕಂಡುಕೊಳ್ಳಲು ಮಾರ್ಚ್ 7 ಮತ್ತು 8ರಂದು ಸೇಂಟ್ ಅಲೋಶಿಯಸ್ ಆವರಣದಲ್ಲಿ 'ಮಂಗಳೂರು ಡಿಸೈನ್ ಸಮಿಟ್ 2026' ಆಯೋಜಿಸಲಾಗಿದೆ ಎಂದು ಅಲ್ಕಾ ಮನೋ ಜ್ ಹೇಳಿದರು. 'ವಿನ್ಯಾಸದ ಭವಿಷ್ಯ, ಪರಂಪರೆ ಯ ಗೌರವ' (Designing Futures, Honouring Heritage) ಎಂಬ ಆಶಯದೊಂದಿಗೆ ನಡೆಯಲಿರುವ ಈ ಎರಡು ದಿನಗಳ ಸಮ್ಮೇಳನವನ್ನು 'ದಿ ಓಹಾ ನಾ ಕಮ್ಯುನಿಟಿ ಫೌಂಡೇಶನ್' ಮತ್ತು ಸೇಂಟ್ ಅಲೋಶಿಯಸ್ ಸಂಸ್ಥೆ ಜಂಟಿಯಾಗಿ ಆಯೋಜಿಸಿವೆ. ಈಸಮಿಟ್‌ನಲ್ಲಿ ಮಂಗಳೂರು ಸ್ಮಾರ್ಟ್‌ಸಿಟಿಯ ಜನರಲ್ ಮ್ಯಾನೇಜರ್ ಅರುಣ್ ಪ್ರಭಾ, ವಾಸ್ತುಶಿಲ್ಪಿ ಅಶೋಕ್ ಮೆಂಡೋನ್ಸಾ, ಪರಿಸರ ತಜ್ಞರಾದ ಶರಾನ್ ಡಿಸೋಜಾ, ನಿರೇನ್ ಜೈನ್, ನೆಸ್ಟರ್ ಫೆರ್ನಾಂಡಿಸ್, ಮಂಗಳೂರು ಮಹಾನಗರ ಪಾಲಿಕೆಯ ಪರಿಸರ ಅಧಿಕಾರಿ ಮಧು ಮ ನೋಹರ್ ಸೇರಿ 20ಕ್ಕೂ ಹೆಚ್ಚು ಗಣ್ಯರು ಭಾಗವಹಿಸಲಿದ್ದಾರೆ.

# ದ.ಕ ಗೆ 'ಎಲಿಫೆಂಟ್‌ಟಾಸ್ಕ್ ಫೋರ್ಸ್'

ಒಂದನೇ ಪುಟದಿಂದ......

ನಡೆಸಲು ಮಡಿಕೇರಿಯಿಂದ ಟಾಸ್ಕ್ ಫೋರ್ಸ್ ತಂಡ ಬರಬೇಕಿತ್ತು. ಇದರಿಂದಾಗಿ ಸಮಯ ವ್ಯರ್ಥವಾಗಿ ಬೆಳೆ ಹಾನಿ ಹೆಚ್ಚಾಗುತ್ತಿತ್ತು. ಆದರೆ ಹೊಸ ಆದೇಶದನ್ವಯ ಸುಳ್ಯವನ್ನು ಈ ಕಾರ್ಯ ಪಡೆಯ ಕೇಂದ್ರ ಸ್ಥಾನವನ್ನಾಗಿ ಮಾಡಲಾಗಿದೆ. ಉಪ್ಪಿನಂಗಡಿ, ಸುಳ್ಯ, ಬೆಳ್ತಂಗಡಿ, ಪುತ್ತೂರು, ಪಂಜ ಮತ್ತು ಸುಬ್ರಹ್ಮಣ್ಯ ವಲಯಗಳು ವ್ಯಾಪ್ತಿಯಲ್ಲಿ ಬರಲಿದೆ. ಒಬ್ಬ ಉಪ ವಲಯ ಅರಣ್ಯಾಧಿಕಾರಿ, ಇಬ್ಬರು ಗಸ್ತು ಅರಣ್ಯ ಪಾಲಕರು ಹಾಗೂ 25 ಹೊರಗುತ್ತಿಗೆ ಸಿಬ್ಬಂದಿ ಸೇರಿದಂತೆ ಒಟ್ಟು 28 ಮಂದಿಯ ತಂಡ ಸನ್ನದ್ಧವಾಗಿರಲಿದ್ದು, ತ್ವರಿತ ಚಲನೆಗಾಗಿ 3 ಬೊಲೆರೊಜೀಪ್ ಹಾಗೂ 2 ಕ್ಯಾಂಟರ್ ವಾಹನಗಳನ್ನು ಒದಗಿಸಲಾಗಿದೆ. ಆನೆಗಳನ್ನು ಹಿಮ್ಮೆಟ್ಟಿಸಲು ಬೇಕಾದ ವಾಕಿ–ಟಾಕಿ, ಬಂದೂಕು ಹಾಗೂ ಪಟಾಕಿಗಳಂತಹ ಆಧುನಿಕ ಸಲಕರಣೆಗಳೊಂದಿಗೆ ಸುಳ್ಯದಲ್ಲಿ 24*7 ನಿಯಂತ್ರಣ ಕೊಠಡಿ ಸ್ಥಾಪನೆಯಾಗಲಿದೆ. ಇದರಿಂದ ರೈತರು ಆನೆ ಹಾವಳಿಯ ಮಾಹಿತಿ ನೀಡಿದ ತಕ್ಷಣವೇ ತಂಡ ಸ್ಥಳಕ್ಕೆ ಧಾವಿಸಲು ಸಾಧ್ಯವಾಗುತ್ತದೆ. "ಕರಾವಳಿ ರೈತರ ಹಿತರಕ್ಷಣೆಯೇ ನನ್ನ ಮೊದಲ ಆದ್ಯತೆ. ಸರ್ಕಾರಕ್ಕೆ ಸತತ ಒತ್ತಡ ಹೇರಿದ ಫಲವಾಗಿ ಇಂದು ಆನೆ ಕಾರ್ಯಪಡೆ ಮಂಜೂರಾಗಿದೆ. ಶೀಘ್ರದಲ್ಲೇ ಈ ತಂಡವು ಪೂರ್ಣ ಪ್ರಮಾಣದಲ್ಲಿ ಕಾರ್ಯಾಚರಣೆ ಆರಂಭಿಸಿ ಕೃಷಿಕರ ನೆರವಿಗೆ ಧಾವಿಸಲಿದೆ ಎಂದುಕಿಶೋರ್‌ಕುಮಾರ್ ಪುತ್ತೂರು ತಿಳಿಸಿದ್ದಾರೆ.

# ಧರ್ಮಸ್ಥಳ ಉಚಿತ ಸಾಮೂಹಿಕ ವಿವಾಹ ನೋಂದಣಿ ಕಛೇರಿ ಉದ್ಘಾಟನೆ



ಉಜಿರೆ: ಧರ್ಮಸ್ಥಳದಲ್ಲಿ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆಯವರ ನೇತೃತ್ವದಲ್ಲಿ 2026ರ ಏಪ್ರಿಲ್ 29ರಂದು ಬುಧವಾರ ಸಂಜೆ 6.40ಕ್ಕೆ ಗೋಧೂಳಿ ಲಗ್ನ ಸುಮುಹೂರ್ತದಲ್ಲಿ 54ನೇ ವರ್ಷದ ಉಚಿತ ಸಾಮೂಹಿಕ ವಿವಾಹ ನಡೆಯಲಿದ್ದು, ವಿವಾಹ ನೋಂದಣಿ ಕಛೇರಿಯನ್ನು ದೇವಸ್ಥಾನದ ಎದುರು ಇರುವ ಪ್ರವಚನಮಂಟಪದಲ್ಲಿ ಎಸ್.ಡಿ.ಎಂ. ಧರ್ಮೋತ್ಥಾನ ಟ್ರಸ್ಟ್ ಕಾರ್ಯದರ್ಶಿ ಎ.ವಿ. ಶೆಟ್ಟಿ ಉದ್ಘಾಟಿಸಿ ಶುಭ ಹಾರೈಸಿದರು. ದೇವಳ ಪಾರುಪತ್ಯಗಾರರಾದ ಲಕ್ಷ್ಮೀನಾರಾಯಣ ರಾವ್, ಧರ್ಮಸ್ಥಳ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಶ್ರೀನಿವಾಸ ರಾವ್, ಸುಬ್ರಹ್ಮಣ್ಯ ಪ್ರಸಾದ್, ಯಶೋಧರ, ಸಂತೋಷ, ಸಂದೀಪ್ ರೈ, ಮಂಜುಳಾ ಉಪಸ್ಥಿತರಿದ್ದರು. ಸಾಮೂಹಿಕ ವಿವಾಹದಲ್ಲಿ ಮದುವೆಯಾಗಲಿಚ್ಛಿಸುವರು ಏಪ್ರಿಲ್ 25ರೊಳಗೆ ಹೆಸರು ನೋಂದಾಯಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗೆ 0825626644, 9663464648, 8147263422 ಸಂಪರ್ಕಿಸಬಹುದು.

# WCPL 2026ನಲ್ಲಿ "ನಮ್ಮ ಉಡುಪಿ" ತಂಡ ಚಾಂಪಿಯನ್



ಬೆಂಗಳೂರು: ಮಹಿಳಾ ಕ್ರಿಕೆಟ್ ಆಟಗಾರ್ತಿಯರಿಗೆ ಸೂಕ್ತ ವೇದಿಕೆ ಕಲ್ಪಿಸುವ ನಿಟ್ಟಿನಲ್ಲಿ ಆಯೋಜಿಸಲಾಗಿದ್ದ ಮಹಿಳಾ ಕ್ರಿಕೆಟ್ ಪ್ರೀಮಿಯರ್ ಲೀಗ್ (WCPL) 2026 ಅದ್ದೂರಿಯಾಗಿ ಸಮಾರೋಪಗೊಂಡಿದೆ. ಜಿದ್ದಾಜಿದ್ದಿನಿಂದ ಕೂಡಿದ್ದ ಫೈನಲ್ ಪಂದ್ಯದಲ್ಲಿ 'ನಮ್ಮ ಉಡುಪಿ' ತಂಡವು ಅಮೋಘ ಜಯ ಸಾಧಿಸಿ ಚಾಂಪಿಯನ್ ಆಗಿ ಹೊರಹೊಮ್ಮಿದೆ ಎಂದು ಸಂದೀಪ್ ಶೆಟ್ಟಿ ಹೇಳಿದರು. ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿ, ಆಲ್ ಇಂಡಿಯಾ ಮೆನ್ಸ್ ಮತ್ತು ವುಮೆನ್ಸ್ ಸ್ಪೋರ್ಟ್ಸ್ ಚಾರಿಟಬಲ್ ಟ್ರಸ್ಟ್ ಆಶ್ರಯದಲ್ಲಿ ನಡೆದ ಈ ಟೂರ್ನಿಯು ದೇಶದಾದ್ಯಂತ 80ಕ್ಕೂ ಹೆಚ್ಚು ಪ್ರತಿಭಾವಂತ ಮಹಿಳಾ ಕ್ರಿಕೆಟ್ ಆಟಗಾರ್ತಿಯರನ್ನು ಒಂದೆಡೆ ಸೇರಿಸಿತ್ತು. ನಾಲ್ಕು ದಿನಗಳ ಕಾಲ ಬೆಂಗಳೂರಿನ ಪೆಸಿ ಯೂನಿವರ್ಸಿಟಿ ಕ್ರಿಕೆಟ್ ಮೈದಾನದಲ್ಲಿ ನಡೆದ ಈ ಕ್ರೀಡಾಕೂಟವು ಪ್ರೇಕ್ಷಕರ ಮನ ಗೆಲ್ಲುವಲ್ಲಿ ಯಶಸ್ವಿಯಾಯಿತು ಎಂದರು.

# ಮಂಗಳೂರು – ಮೂಡುಬಿದ್ರೆ ನೂತನ ಕೆಎಸ್‌ಆರ್‌ಟಿಸಿ ಬಸ್ ಸಂಚಾರಕ್ಕೆ ಚಾಲನೆ



ಮಂಗಳೂರು: ಮಂಗಳೂರು ನಗರದಿಂದ ಮೂಡುಬಿದ್ರೆ ಮಾರ್ಗವಾಗಿ ಸಂಚರಿಸುವ ನೂತನ ಸರಕಾರಿ ನಗರ ಸಾರಿಗೆ ಬಸ್ಸಿಗೆ ಮಂಗಳೂರು ಉತ್ತರ ಕ್ಷೇತ್ರದ ಶಾಸಕ ಡಾ. ವೈ. ಭರತ್ ಶೆಟ್ಟಿ ಅವರು ಹಸಿರು ನಿಶಾನೆ ತೋರಿದರು. ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕರು, ಸಾರ್ವಜನಿಕರ ಅನುಕೂಲಕ್ಕಾಗಿ ಈ ಸೇವೆ ಆರಂಭಿಸಲಾಗಿದೆ ಎಂದರು. ಸುರತ್ಕಲ್ – ಪರಂಗಿಪೇಟೆ ಮತ್ತು ಆಕಾಶಭವನ – ಪಡೀಲ್ ನಡುವಿನ ನೂತನ ಬಸ್ ಸಂಚಾರ ವನ್ನು ತಕ್ಷಣವೇ ಆರಂಭಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಪಳ್ಳಿ "ಫಿಶ್ ಮೀಲ್" ನಿರ್ಮಾಣದ ವಿರುದ್ಧ ಶಾಸಕರಿಗೆ ಮನವಿ



ಕಾರ್ಕಳ: ಪಳ್ಳಿ ಗ್ರಾಮದ ಕೊಡಿಮಲೆಯಲ್ಲಿ ನಿರ್ಮಾಣವಾಗುತ್ತಿರುವ ಫಿಶ್ ಮೀಲ್ ಕಂಪೆನಿ ವಿರುದ್ಧ ಗ್ರಾಮಸ್ಥರು ಒಗ್ಗಟ್ಟಾಗಿದ್ದು ಈಗಾಗಲೇ ಪಂಚಾಯತ್ ಎದುರು ಪ್ರತಿಭಟನೆ ನಡೆದಿದೆ. ಸ್ಥಳಕ್ಕೆ ಪಂಚಾಯತ್ ಪಿಡಿಓ, ತಹಶೀಲ್ದಾರ್ ಭೇಟಿ ಕೊಟ್ಟು ಪರಿಶೀಲನೆಯನ್ನು ನಡೆಸಿದ್ದಾರೆ. ಆದರೂ ಕಾಮಗಾರಿ ಮುಂದುವರಿದಿರುವ ಬಗ್ಗೆ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದು ಇಂದು ಕಾರ್ಕಳ ಶಾಸಕ ಸುನೀಲ್ ಕುಮಾರ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದಾರೆ. ಪಳ್ಳಿ ಕೊಡಿಮಲೆ ಪರಿಸರದ ಗ್ರಾಮಸ್ಥರು ಮನವಿ ನೀಡಿದ್ದು ಸಮಸ್ಯೆಯ ಕುರಿತು ವಿವರವಾಗಿ ಶಾಸಕರಿಗೆ ತಿಳಿಸಿದ್ದಾರೆ. ಇದಕ್ಕೆ ಸ್ಪಂದಿಸಿದ ಶಾಸಕರು ಯಾವುದೇ ಕಾರಣಕ್ಕೂ ಸ್ಥಳಿಯ ಆಡಳಿತದ ಹಾಗೂ ಪರಿಸರದ ಜನತೆಗೆ ತಿಳಿಸದೆ ಮತ್ತವರ ಒಪ್ಪಿಗೆಯಿಲ್ಲದೇ ಯಾವುದೇ ಕಟ್ಟಡ ನಿರ್ಮಿಸಲು ಸಾಧ್ಯವಿಲ್ಲ. ನಾನು ನಿಮ್ಮ ಜೊತೆ ಯಾವಾಗಲೂ ಇರುತ್ತೇನೆ ಎಂದು ಭರವಸೆ ನೀಡಿದ್ದಾರೆ.

# ಮಂಗಳೂರು ಕಡಲತೀರದಲ್ಲಿ ಹಾರಲಿದೆ ಅಲ್ಟಿಮೇಟ್ ಡಿಸ್ಕ್



ಮಂಗಳೂರು: ಕರಾವಳಿಯ ಸುಂದರ ತೀರ ತಣ್ಣೀರುಬಾವಿ ಬೀಚ್ ಇದೀಗ ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಕ್ಕೆ ಸಾಕ್ಷಿಯಾಗಲು ಸಜ್ಜಾಗಿದೆ. ಮಾರ್ಚ್ 6ರಿಂದ 8ರವರೆಗೆ 'ಇಂಡಿಯಾ ಅಲ್ಟಿಮೇಟ್ ಬೀಚ್ ನ್ಯಾಷನಲ್ಸ್ 2026' ಪಂದ್ಯಾವಳಿಗಳು ನಡೆಯಲಿವೆ ಎಂದು ಯಂಗ್ ಇಂಡಿಯನ್ಸ್ ಮಂಗಳೂರು ಅಧ್ಯಾಯದ ಅಧ್ಯಕ್ಷ ಹಾಗೂ ಕೋಸ್ಟಲ್ ಕರ್ನಾಟಕ ಟೂರಿಸಂ ಡೆವಲಪ್ಮೆಂಟ್ ಕೌನ್ಸಿಲ್ ಸಿಇಒ ಶರಣ್ ಶೆಟ್ಟಿ ತಿಳಿಸಿದ್ದಾರೆ. ಭಾರತದ ವಿವಿಧ ರಾಜ್ಯಗಳ ಶ್ರೇಷ್ಠ ತಂಡಗಳು ಈ ಚಾಂಪಿಯನ್‌ಶಿಪ್‌ನಲ್ಲಿ ಭಾಗವಹಿಸಲಿವೆ. ಇದು ರಾಷ್ಟ್ರೀಯ ತಂಡಗಳ ಆಯ್ಕೆಗೆ ಪ್ರಮುಖ ವೇದಿಕೆಯಾಗಲಿದ್ದು, 'ಇಂಡಿಯಾ ಅಲ್ಟಿಮೇಟ್' ಆಶ್ರಯದಲ್ಲಿ ಹಾಗೂ ಕರ್ನಾಟಕ ಅಲ್ಟಿಮೇಟ್ ಪ್ಲೇಯರ್ಸ್ ಅಸೋಸಿಯೇಷನ್ (ಏಗಕಂ) ಆತಿಥ್ಯದಲ್ಲಿ ಈ ಕೂಟ ಆಯೋಜಿಸಲಾಗಿದೆ ಎಂದರು. ಈ ಹಿಂದೆ ಚೆನ್ನೈನಂತಹ ಪೂರ್ವ ತೀರದ ನಗರಗಳಲ್ಲಿ ನಡೆಯುತ್ತಿದ್ದ ಈ ಪ್ರತಿಷ್ಠಿತ ಟೂರ್ನಮೆಂಟ್, ಇದೇ ಮೊದಲ ಬಾರಿಗೆ ಮಂಗಳೂರಿನಲ್ಲಿ ನಡೆಯುತ್ತಿರುವುದು ಹೆಮ್ಮೆಯ ವಿಷಯ ಎಂದರು.

# ಅಲ್ಪಸಂಖ್ಯಾತರ ವಸತಿ ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಂಗಳೂರು – ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ, ಮತ್ತು ಪಾರ್ಸಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ದ.ಕ ಜಿಲ್ಲೆಯಲ್ಲಿರುವ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳಿಗೆ ಶೈಕ್ಷಣಿಕ ವರ್ಷ 2026–27ನೇ ಸಾಲಿನಲ್ಲಿ 6ನೇ ತರಗತಿಗೆ ಉಚಿತ ಪ್ರವೇಶಕ್ಕಾಗಿ ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಮಂಗಳೂರು ದೂರವಾಣಿ ಸಂಖ್ಯೆ 08242433078 ಹಾಗೂ ಇಲಾಖೆಯ ವೆಬ್‌ಸೈಟ್ https://dom.karnataka.gov.in ಸಂಪರ್ಕಿಸಬಹುದು.

# ನಾಟಕ ನಿರ್ದೇಶಕರು ಮತ್ತು ಸಹಾಯಕ ನಿರ್ದೇಶಕರ ಆಯ್ಕೆಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಶಿವಮೊಗ್ಗ ರಂಗಾಯಣವು ಏ.14ರಿಂದ ಮೇ.03ರವರೆಗೆ ಆಯೋಜಿಸುತ್ತಿರುವ ಚಿಣ್ಣರ ಸಿಹಿಮೊಗ್ಗೆ–ಮಕ್ಕಳ ಬೇಸಿಗೆ ಶಿಬಿರದಲ್ಲಿ ಮಕ್ಕಳಿಗೆ ರಂಗತರಬೇತಿ, ನಾಟಕ ನಿರ್ದೇಶನ ಮಾಡಲು ರಂಗಭೂಮಿಯ ಹಿನ್ನೆಲೆಯುಳ್ಳ 06 ನಾಟಕ ನಿರ್ದೇಶಕರು ಮತ್ತು 06 ಜನ ಸಹಾಯಕ ನಿರ್ದೇಶಕರ ಆಯ್ಕೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ರಂಗಾಯಣ, ಶಿವಮೊಗ್ಗ ಕಛೇರಿ, ದೂರವಾಣಿ ಸಂಖ್ಯೆ 08182–256353, 7975229166 ಯನ್ನು ಸಂಪರ್ಕಿಸಬಹುದಾಗಿದೆ.

# ಸಹಾಯಧನ ಪಡೆಯಲು ಅರ್ಜಿ ಆಹ್ವಾನ

ಶಿವಮೊಗ್ಗ : ಪ್ರವಾಸೋದ್ಯಮ ಇಲಾಖೆಯ ವತಿಯಿಂದ 2025–26ನೇ ಸಾಲಿನಲ್ಲಿ ರಾಜ್ಯದ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ಅನುಕೂಲಕ್ಕಾಗಿ ಹಾಗೂ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸುವ ಉದ್ದೇಶದಿಂದ ಮೊಬೈಲ್ ಕ್ಯಾಂಟೀನ್ ಯೋಜನೆಯನ್ನು ಜಾರಿಗೆ ತರಲಾಗಿದ್ದು, ಈ ಯೋಜನೆಯಡಿ ಶಿವಮೊಗ್ಗ ಜಿಲ್ಲೆಯ ನಿವಾಸಿಗಳಾಗಿರುವ ಪರಿಶಿಷ್ಟ ಜಾತಿಗೆ ಸೇರಿದ 06 ಅಭ್ಯರ್ಥಿಗಳು ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 04 ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ವಾಹನ ಖರೀದಿಸಲು ಸಹಾಯಧನ ನೀಡುವ ಉದ್ದೇಶದಿಂದ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 08182–251444 ನ್ನು ಸಂಪರ್ಕಿಸುವುದು.

# ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಮಡಿಕೇರಿ – 2025–26ನೇ ಸಾಲಿನ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿ., ಮೈಸೂರು ಇವರ ವತಿಯಿಂದ ಅನುಷ್ಠಾನಗೊಳಲ್ಲಿರುವ ಪರಿಶಿಷ್ಟ ಜಾತಿ ಯೋಜನೆ ಎಸ್‌ಸಿಪಿ ಮತ್ತು ಗಿರಿಜನ ಉಪಯೋಜನೆ (ಟಿಎಸ್‌ಪಿ) ಅಡಿ, 10+01 ಕುರಿ/ಮೇಕೆ ಘಟಕಗಳ ವಿತರಣೆಗಾಗಿ ಹಾಗೂ ಸಹಾಯಧನ ಪಡೆಯಲು ಕೊಡಗು ಜಿಲ್ಲೆಗೆ 05 ಎಸ್‌ಸಿಪಿ ಹಾಗೂ 04 ಟಿಎಸ್‌ಪಿ ಗುರಿಗಳನ್ನು ನಿಗಧಿಪಡಿಸಿದ್ದು ಜಿಲ್ಲೆಯಲ್ಲಿನ 18 ರಿಂದ 60 ವರ್ಷ ವಯೋಮಿತಿ ಇರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕೂಲಿ ಕಾರ್ಮಿಕರು, ಕೃಷಿ ಕಾರ್ಮಿಕರು ಮತ್ತು ಪಶು ಸಂಗೋಪನೆಯಲ್ಲಿ ತೊಡಗಿಸಿಕೊಂಡ ಆಸಕ್ತ ರೈತ ಬಾಂಧವರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

# ಯೆನೆಪೋಯ ವಿವಿಯಲ್ಲಿ ರಾಷ್ಟ್ರೀಯ ಸಮ್ಮೇಳನ



ಮಂಗಳೂರು: ದೇರಳಕಟ್ಟೆಯ ಯೆನೆಪೋಯ ಪರಿಗಣಿತ ವಿ.ವಿ.ಯ ಯೆನೆಪೋಯ ನರ್ಸಿಂಗ್ ಕಾಲೇಜಿನ ನರ್ಸಿಂಗ್ ಶಿಕ್ಷಣ ವಿಭಾಗ ಮತ್ತು ಪ್ರಥಮ ವರ್ಷದ ಎಂ.ಎಸ್ಸಿ ನರ್ಸಿಂಗ್ ವಿಭಾಗದ ವತಿಯಿಂದ ಡಿಜಿಟಲ್ ಶಿಕ್ಷಣಶಾಸ್ತ್ರ ಬೋಧನ –ಕಲಿಕೆಯಲ್ಲಿ ಕಲೆ ವಿಷಯದ ಬಗ್ಗೆ ಸಂಸ್ಥೆಯ ಯೆಂಡೋರೆನ್ಸ್ ಸಭಾಂಗಣದಲ್ಲಿ ರಾಷ್ಟ್ರೀಯ ಸಮ್ಮೇಳನ ನಡೆಯಿತು. ಸಮ್ಮೇಳನ ಉದ್ಘಾಟಿಸಿದ ಲಕ್ಷ್ಮಿ ಮೆಮೋರಿಯಲ್ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲೆ ಡಾ. ಲರಿಸ್ಸಾ ಮಾರ್ಥಾ ಸ್ಯಾಮ್ಸ್ ಮಾತನಾಡಿ "ವಿದ್ಯಾರ್ಥಿಗಳು ಮತ್ತು ಬೋಧಕರು ಕೃತಕ ಬುದ್ಧಿಮತ್ತೆ ಸಾಧನಗಳನ್ನು ಬುದ್ಧಿವಂತಿಕೆಯಿಂದ ಬಳಸಿಕೊಳ್ಳಬೇಕು . ಡಿಜಿಟಲ್ ನೈತಿಕತೆ ಮತ್ತು ಆಧುನಿಕ ಶಿಕ್ಷಣದಲ್ಲಿ ಲಭ್ಯವಿರುವ ತಾಂತ್ರಿಕ ಸೌಲಭ್ಯಗಳ ಬಗ್ಗೆ ಅರಿವು ಹೊಂದಿರುವುದು ಅತ್ಯಗತ್ಯ ಎಂದರು.

# ಡಿಸೆಂಬರ್‌ನಲ್ಲಿ ಡಾ ಕನ್ಯಾನ ಸದಾಶಿವ ಶೆಟ್ಟಿ ಸಂಕೀರ್ಣ ಲೋಕಾರ್ಪಣೆ



ಮಂಗಳೂರು: ನಿರಂತರ ಸಮಾಜ ಕಾರ್ಯಗಳಲ್ಲಿ ಜಾಗತಿಕ ಬಂಟರ ಸಂಘಗಳ ಒಕ್ಕೂಟ ತೊಡಗಿಸಿಕೊಂಡಿದೆ. ಮುಲ್ಕಿಯಲ್ಲಿ ಡಾ ಕನ್ಯಾನ ಸದಾಶಿವ ಶೆಟ್ಟಿ ಸಂಕೀರ್ಣದ ಕೆಲಸ ತ್ವರಿತವಾಗಿ ನಡೆಯುತ್ತಿದೆ. ಮಹಾದಾನಿ ಡಾ ಕನ್ಯಾನ ಸದಾಶಿವ ಶೆಟ್ಟಿಯವರ ಆಶಯ, ಆಶೀರ್ವಾದಿಂದ ಸಂಕೀರ್ಣದ ಕೆಲಸ ಪ್ರಗತಿಯಲ್ಲಿದೆ. ಸಂಕೀರ್ಣದಲ್ಲಿ ಶ್ರೀಮತಿ ಶಶಿರೇಖಾ ಆನಂದ ಶೆಟ್ಟಿ ಅವರ ಹೆಸರಿನಲ್ಲಿ ವೇದಿಕೆ ಇದೆ. ಇದರ ಜೊತೆಗೆ ಕಿರು ಸಭಾಂಗಣ, ಧರ್ಮ ಚಾವಡಿ, ಪ್ರವೀಣ್ ಭೋಜ ಶೆಟ್ಟಿ ಆಡ ಳಿತ ಕಚೇರಿಯೂ ಇದೆ. ಡಿಸೆಂಬರ್ ತಿಂಗಳಲ್ಲಿ "ಡಾ ಕನ್ಯಾನ ಸದಾಶಿವ ಶೆಟ್ಟಿ ಸಂಕೀರ್ಣ" ಲೋಕಾರ್ಪಣೆಗೊಳ್ಳಲಿದೆ ಎಂದು ಜಾಗತಿಕ ಬಂಟರ ಸಂಘಗಳ ಒಕ್ಕೂಟದ ಅಧ್ಯಕ್ಷ ಐಕಳ ಹರೀಶ್ ಶೆಟ್ಟಿ ತಿಳಿಸಿದರು. 40 ವರ್ಷ ಇತಿಹಾಸ ಇರುವ ಜಾಗತಿಕ ಬಂಟರ ಸಂಘಗಳ ಒಕ್ಕೂಟ ಐಕಳ ಹರೀಶ್ ಶೆಟ್ಟಿ ಒಕ್ಕೂಟದ ಅಧ್ಯಕ್ಷರಾದ ಬಳಿಕ ಒಕ್ಕೂಟದ ಚಿತ್ರಣವನ್ನೇ ಬದಲಾಯಿಸಿದರು ಎಂದರು.

# ಅಧಿಕಾರಿಗಳ ಜೊತೆ ಶಾಸಕ ಕಾಮತ್ ಚರ್ಚೆ



ಮಂಗಳೂರು: ನಗರದ ಕದ್ರಿ, ಶಕ್ತಿನಗರ ಪರಿಸರದಲ್ಲಿ ರಾತ್ರಿ ವೇಳೆ ಚಿರತೆ ಕಾಣಿಸಿಕೊಂಡಿರುವ ಹಿನ್ನಲೆಯಲ್ಲಿ ಶಾಸಕ ವೇದವ್ಯಾಸ ಕಾಮತ್ ಅರಣ್ಯಾಧಿಕಾರಿಗಳೊಂದಿಗೆ ಸಭೆ ನಡೆಸಿ ಸಾರ್ವಜನಿಕರ ಹಿತದೃಷ್ಟಿಯಿಂದ ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಕದ್ರಿ ಕೈಬಟ್ಟಲ್, ಶಕ್ತಿನಗರದ ಕೋರ್ಡೆಲ್ ಪ್ರದೇಶಗಳಲ್ಲಿ ಚಿರತೆ ಓಡಾಡುತ್ತಿದ್ದ ದೃಶ್ಯಗಳು ಸಿಸಿಟಿವಿ ಕ್ಯಾಮೆರಾಗಳಲ್ಲಿ ದಾಖಲಾಗಿತ್ತು. ಚಿರತೆಯನ್ನು ಸೆರೆ ಹಿಡಿಯಲು ಅರಣ್ಯ ಇಲಾಖೆಯಿಂದ ಬೋನುಗಳನ್ನು ಇಡಲಾಗಿದೆ. ಈ ಎರಡೂ ಭಾಗಗಳಲ್ಲಿ ಕಾಣಿಸಿಕೊಂಡ ಚಿರತೆ ಒಂದೇ ಆಗಿರುವ ಸಾಧ್ಯತೆಯೂ ಇದೆ.



ಕರಾವಳಿ ತರಂಗಿಣಿ

# ಸಿನಿ ತರಂಗಿಣಿ













KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021